# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 53 ಆರ್‌ಟಿಐ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 24.03.2014.

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ರಡಿ ಪ್ರತಿ ಇಲಾಖೆಯಲ್ಲೂ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರದ ಹೆಸರುಗಳನ್ನು ನಾಮಫಲಕದಲ್ಲಿ ಬರೆಯಿಸಿ ಹಾಕುವ ಮತ್ತು ಮಾಹಿತಿ ಹಕ್ಕು ಅಧಿನಿಯಮ 2005ರಡಿ ಅರ್ಜಿದಾರರಿಗೆ ಮಾಹಿತಿ ನೀಡುವಾಗ ಸಂಪೂರ್ಣ ವಿಳಾಸ ತಿಳಿಸುವ ಕುರಿತು

---0---

ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 4(1)(ಬಿ)ರನ್ವಯ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು, ಆಯಾ ಇಲಾಖೆಯಲ್ಲಿನ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ(ನಿರ್ವಹಿಸುತ್ತಿರುವ ಶಾಖೆ ಮತ್ತು ಕಾರ್ಯದ ವಿವರಗಳೊಂದಿಗೆ), ಮೇಲ್ಮನವಿ ಪ್ರಾಧಿಕಾರಿಗಳ ಹೆಸರು, ಹುದ್ದೆಗಳನ್ನು ಸದರಿ ಕಲಂನಲ್ಲಿ ತಿಳಿಸಿರುವಂತೆ ಇತರ ವಿವರಗಳೊಂದಿಗೆ ಕಛೇರಿಗಳ ಮುಂಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು ಮತ್ತು ಅಧಿಕಾರಿಗಳು ಬದಲಾವಣೆಯಾಗುವ ಸಮಯದಲ್ಲಿ ಅವುಗಳನ್ನು ಕೂಡಲೇ ಪರಿಷ್ಕರಿಸಲು ಕ್ರಮಕೈಗೊಳ್ಳಬೇಕು. ಹಾಗೆಯೇ ಈ ಎಲ್ಲ ವಿವರಗಳನ್ನು ಕಲಂ 4(2) ರನ್ವಯ ಸ್ವಪ್ರೇರಿತವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮಜರುಗಿಸತಕ್ಕದ್ದು. ಈ ಕಾರ್ಯವನ್ನು 31.03.2014ರೊಳಗಾಗಿ ಪೂರೈಸಲು ಮತ್ತು ಮಾಹಿತಿ ಹಕ್ಕು ಅಧಿನಿಯಮ 2005ರಡಿ ಅರ್ಜಿದಾರರಿಗೆ ಮಾಹಿತಿ ನೀಡುವಾಗ ಸಾರ್ವಜನಿಕ ಮಾಹಿತಿ ಅಧಿಕಾರಿಯ ಮತ್ತು ಮೊದಲ ಅಪೀಲು ಪ್ರಾಧಿಕಾರದ ಸಂಪೂರ್ಣ ವಿಳಾಸ, ದೂರವಾಣಿ ಸಂಖ್ಯೆಯೊಂದಿಗೆ ನಮೂದಿಸಿ ಕಳುಹಿಸುವಂತೆ ತಮ್ಮ ಆಡಳಿತದ ಅಧೀನಕ್ಕೊಳಪಡುವ ಎಲ್ಲಾ ಅಧಿಕಾರಿಗಳು, ಸಾರ್ವಜನಿಕ ಪ್ರಾಧಿಕಾರಿಗಳು, ಇಲಾಖಾ ಮುಖ್ಯಸ್ಥರು, ನಿಗಮ/ಮಂಡಳಿ, ಸರ್ಕಾರಿ ಸ್ವಾಮ್ಯ ಸಂಘ/ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲಾಗಿದೆ.

(ಪ್ರಮೋದ್ ಪಾಂಡೆ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

ಇವರಿಗೆ,

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು

Office work\Right to information-2014\circulars